Bangalore
Regional News
29.09.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಕಲ್ಯಾಣ ಕರ್ನಾಟಕದಲ್ಲಿ ಭೀಮಾನದಿ ಪ್ರವಾಹ; ಯಾದಗಿರಿ, ಕಲಬುರಗಿ, ವಿಜಯಪುರದಲ್ಲಿ ಜನಜೀವನ ಅಸ್ತವ್ಯಸ್ತ

೨. ಜಿಬಿಎ ವ್ಯಾಪ್ತಿಯಲ್ಲಿ ವಿದ್ಯುತ್ ಹಾಗೂ ನೀರಿನ ಸಂಪರ್ಕ ಕಲ್ಪಿಸುವ ಕುರಿತಂತೆ ಸಚಿವರೊಂದಿಗೆ ಮುಖ್ಯಮಂತ್ರಿ ಸಭೆ

೩. ಕಾಂಗ್ರೆಸ್ ಸರ್ಕಾರದಲ್ಲಿ ಶೇಕಡಾ ೮೦ರಷ್ಟು ಕಮಿಷನ್; ಬಿಜೆಪಿ ಗಂಭೀರ ಆರೋಪ

೪. ರಾಮನಗರದಲ್ಲಿ ೭ ದಿನದಲ್ಲಿ ಶೇಕಡಾ ೧೦೦ರಷ್ಟು ಸಮೀಕ್ಷಾ ಕಾರ್ಯ ಪೂರ್ಣಗೊಳಿಸಿದ ಶಿಕ್ಷಕಿ ಶಾಂತಮ್ಮ - ಜಿಲ್ಲಾಧಿಕಾರಿಯಿಂದ ಅಭಿನಂದನೆ

೫. ಹಿರಿಯ ರಂಗಭೂಮಿ ಕಲಾವಿದ ಯಶವಂತ ಸರದೇಶ ಪಾಂಡೆ ನಿಧನ : ಪ್ರಲ್ಹಾದ್ ಜೋಶಿ ಸೇರಿದಂತೆ ಗಣ್ಯರಿಂದ ಸಂತಾಪ

><><><><><><

ಯಾದಗಿರಿಯಲ್ಲಿ ಭೀಮಾ ನದಿಯು ಪ್ರವಾಹ ಮುಂದುವರಿದಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಯಾದಗಿರಿ ಜಿಲ್ಲೆಯ ನದಿ ತೀರದ ಸಾವಿರಾರು ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ನದಿಯಲ್ಲಿ ಪ್ರವಾಹ ಹೆಚ್ಚುವ ಸಾಧ್ಯತೆ ಇರುವುದರಿಂದ ರಕ್ಷಣಾ ಕಾರ್ಯಾಚರಣೆಗೆ ಎನ್.ಡಿ.ಆರ್.ಎಫ್ ತಂಡ ನಿಯೋಜಿಸಲಾಗಿದೆ. ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಹುರಸಗುಂಡಗಿ ಹಾಗೂ ರೋಜಾ ಎಸ್ ಗ್ರಾಮಗಳ ೧೧೫ ಕುಟುಂಬಗಳ ೪೦೦ ಜನರನ್ನು ಹಾಗೂ ವಡಗೇರಾ ತಾಲ್ಲೂಕಿನ ಶಿವನೂರು, ನಾಯ್ಕಲ್ ಮತ್ತು ಮಾಚನೂರು ಗ್ರಾಮಗಳ ೩೩೦ ಕುಟುಂಬಗಳ ೯೬೦ ಜನರಿಗೆ ಕಾಳಜಿ ಕೇಂದ್ರಗಳಲ್ಲಿ ಆಶ್ರಯ ಕಲ್ಪಿಸಲಾಗಿದೆ. ಮಳೆಯಿಂದ ಇದುವರೆಗೂ ೧೦೪ ಮನೆಗಳಿಗೆ ಹಾನಿಯಾಗಿ, ೨೨ ಜಾನುವಾರುಗಳು ಮೃತಪಟ್ಟಿವೆ. ನದಿ ನೀರು ಹಾಗೂ ಮಳೆಗೆ ಸುಮಾರು ೧.೧೮ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿನ ಬೆಳೆಗಳಿಗೆ ಹಾನಿಯಾಗಿದೆ, ೧೨೦ ಹೆಕ್ಟೇರ್ ಪ್ರದೇಶದ ತೋಟಗಾರಿಕಾ ಬೆಳೆಗಳು ಸಹ ಹಾನಿಗೆ ಒಳಗಾಗಿವೆ ಎಂದು ಅಧಿಕಾರಿಗಳು

ತಿಳಿಸಿದ್ದಾರೆ.  ಪ್ರವಾಹದ ನೀರು ಯಾದಗಿರಿ ನಗರಕ್ಕೂ ವ್ಯಾಪಿಸಿದ್ದು ನೂರಾರು ಮನೆಗಳು, ಕಟ್ಟಡಗಳು ಜಲಾವೃತವಾಗಿವೆ.

><><><><><><

ಮುಂಗಾರು ಹಂಗಾಮಿನಲ್ಲಿ ವಿಜಯಪುರದಲ್ಲಿ ಸಾಮಾನ್ಯ ಮಳೆಗಿಂತ ಸರಾಸರಿ ಶೇಕಡಾ ೬೦ರಷ್ಟು ಹೆಚ್ಚು ಮಳೆಯಾಗಿದ್ದು, ವಿಶೇಷವಾಗಿ ಸೆಪ್ಟೆಂಬರ್-ತಿಂಗಳಿನಲ್ಲಿ ಸಾಮಾನ್ಯ ಮಳೆಗಿಂತ ೨೨೬ ಮಿಲೀ ಮೀಟರ್ ಹೆಚ್ಚಿಗೆ ಮಳೆಯಾಗಿದೆ. ಇದು ವಾಡಿಕೆಗಿಂತ ಶೇಕಡಾ ೭೩ರಷ್ಟು ಹೆಚ್ಚಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ್  ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,   ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿಯೇ ವಿಜಯಪುರ ಜಿಲ್ಲೆಯಲ್ಲಿ ವಾಡಿಕೆಗಿಂತ ಅತಿ ಹೆಚ್ಚು ಮಳೆಯಾಗಿದೆ. ಭೀಮಾ ನದಿ ಪಾತ್ರಕ್ಕೆ ಅಂದಾಜು ೩.೫೦ ಲಕ್ಷ ಕ್ಯೂಸೆಕ್ ನೀರನ್ನು ಹರಿದು ಬಿಟ್ಟಿರುವುದರಿಂದ ಜಿಲ್ಲೆಯ ಇಂಡಿ ತಾಲೂಕಿನ ೮ ಗ್ರಾಮಗಳು ಮತ್ತು ಆಲಮೇಲ ತಾಲೂಕಿನ ೬ ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ.  ಒಟ್ಟು ೧೭ ಕಾಳಜಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಒಟ್ಟು ೮೬೦ ಜನರನ್ನು ಸುರಕ್ಷಿತವಾಗಿ ಸ್ಥಳಾಂತರಿಸಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳನ್ನು ನಿಯೋಜಿಸಿ, ವಸತಿ, ಉಪಹಾರ, ಊಟದ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

><><><><><><

ಕಲಬುರಗಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಮಳೆ ಹಾಗೂ ಭೀಮಾ ನದಿಯ ಪ್ರವಾಹದಿಂದಾಗಿ ಈ ಭಾಗದ ಜನರು ಹಾಗೂ ರೈತರು ಸಂಕಷ್ಟ ಎದುರಿಸುವಂತಾಗಿದೆ. ಜಿಲ್ಲೆಯ ಹಲವು ಗ್ರಾಮಗಳಲ್ಲಿ ಮಳೆ ಹಾಗೂ ಪ್ರವಾಹದ ಅವಾಂತರದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಬೆಳೆಗಳು ಹಾನಿಯಾಗಿ, ಕೃಷಿ ಕಾರ್ಯಗಳು ಸ್ಥಗಿತಗೊಂಡಿದ್ದರಿಂದ ರೈತರು ಆತಂಕಗೊಂಡಿದ್ದಾರೆ. ಮಹಾರಾಷ್ಟ್ರದ ವೀರ್, ಉಜ್ಜನಿ, ಸಿನಾ ಜಲಾಶಯ ಮತ್ತು ಬೋರಿ ಹಳ್ಳದಿಂದ ಹರಿದು ಬರುತ್ತಿರುವ ಅಪಾರ ಪ್ರಮಾಣದ ನೀರು ಹಾಗೂ ಅಫಜಲಪುರದ ಸೋನ್ ಬ್ಯಾರೇಜ್‌ನಿಂದ ನೀರು ಹರಿಬಿಟ್ಟಿರೋದರಿಂದ ಕಲಬುರಗಿ, ಅಫಜಲಪುರ, ಜೇವರ್ಗಿ, ಚಿತ್ತಾಪೂರ ತಾಲ್ಲೂಕಿನ ನದಿಯ ಪಾತ್ರದ ಗ್ರಾಮಗಳ ಮನೆಗಳಿಗೆ ನೀರು ನುಗ್ಗಿದೆ. ಪರಿಣಾಮ ಅಪಾರ ಪ್ರಮಾಣದ ದವಸ ಧಾನ್ಯ, ಇತರೆ ವಸ್ತುಗಳು ಹಾಳಾಗಿವೆ. ಮಳೆ ಹಾಗೂ ಪ್ರವಾಹದಿಂದ ಜನರು ಸೂರು, ಆಹಾರ, ಕುಡಿಯುವ ನೀರಿನ ಸಮಸ್ಯೆ ಎದುರಿಸುವಂತಾಗಿದೆ. ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಭವರ್ ಸಿಂಗ್ ಮೀನಾ ಮಾತನಾಡಿ, ಮಳೆ ಹಾಗೂ ಪ್ರವಾಹದಿಂದ ೩೫ ಗ್ರಾಮಗಳು ಮುಳುಗಡೆಯಾಗಿರುವುದರಿಂದ ೨೫ ಕಡೆಗಳಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದೆ

ಎಂದು ಹೇಳಿದ್ದಾರೆ. ಸಂತ್ರಸ್ತರಿಗೆ ಆಹಾರ, ನೀರು, ಶೌಚಾಲಯ ಒದಗಿಸುವಂತೆ ಸೂಚಿಸಲಾಗಿದೆ. ಪ್ರವಾಹದಲ್ಲಿ ಸಿಲುಕಿರುವವರ ರಕ್ಷಣೆಗೆ ಓಆಖಈ ಹಾಗೂ ಖಆಖಈ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿವೆ ಎಂದು ತಿಳಿಸಿದ್ದಾರೆ.

><><><><><

ಉತ್ತರ ಕನ್ನಡ ಜಿಲ್ಲೆಯ ಕರಾವಳಿಯ ಐದು ತಾಲ್ಲೂಕುಗಳಲ್ಲಿ ಅಕ್ಟೋಬರ್ ೨ರವರೆಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಮುನ್ಸೂಚನೆ ನೀಡಿದೆ. ಸಾರ್ವಜನಿಕರು ಜಾಗೃತೆ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಮನವಿ ಮಾಡಿದ್ದಾರೆ. ಈ ಅವಧಿಯಲ್ಲಿ, ಸಣ್ಣ ಹಾಗೂ ಮಧ್ಯಮ ದೋಣಿಗಳು ಮೀನುಗಾರಿಕೆಗೆ ಇಳಿಯದಂತೆ, ಸಾರ್ವಜನಿಕರು ಹಾಗೂ ಮೀನುಗಾರರು ಸಮುದ್ರ ಪ್ರದೇಶಗಳಿಗೆ ತೆರಳದಂತೆ ಸೂಚಿಸಿದ್ದಾರೆ. ಪ್ರವಾಸಿಗರು, ಹಾಗೂ ಸಾರ್ವಜನಿಕರು ನದಿ/ನೀರಿರುವ ಪ್ರದೇಶ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸುವುದು. ಸಮುದ್ರ ತೀರದಲ್ಲಿ ಯಾವುದೇ ಮನರಂಜನಾ ಚಟುವಟಿಕೆಗಳನ್ನು ಹಮ್ಮಿಕೊಳ್ಳದಂತೆ ನಿರ್ದೇಶನ ನೀಡಿದ್ದಾರೆ.

><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಹಾಗೂ ರಾಜ್ಯದ ಇತರೆ ಕಡೆಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಮತ್ತು ನೀರಿನ ಸಂಪರ್ಕ ಕಲ್ಪಿಸುವಲ್ಲಿ ಇರುವ ತೊಡಕುಗಳ ಕುರಿತಂತೆ ನಗರಾಭಿವೃದ್ಧಿ, ಪೌರಾಡಳಿತ ಇಲಾಖೆ, ಬೆಂಗಳೂರು ಜಲಮಂಡಳಿ, ಕೆಪಿಟಿಸಿಎಲ್, ಬೆಸ್ಕಾಂನ ಹಿರಿಯ ಅಧಿಕಾರಿಗಳ ಜೊತೆ ಗೃಹ ಕಚೇರಿ ಕೃಷ್ಣಾದಲ್ಲಿ ಇಂದು ಸಭೆ ನಡೆಸಿದರು. ಸಭೆಯಲ್ಲಿ ಬಹುಕಾಲದಿಂದ ಇರುವ ಸಮಸ್ಯೆಗಳು ಮತ್ತು ಪರಿಹಾರ ಮಾರ್ಗೋಪಾಯಗಳ ಬಗ್ಗೆ ಚರ್ಚಿಸಿದರು. ಇಂಧನ ಸಚಿವ ಕೆ.ಜೆ.ಜಾರ್ಜ್, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಪೌರಾಡಳಿತ ಸಚಿವ ರಹೀಂ ಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

><><><><><

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಶೇಕಡಾ ಲ೦ರಷ್ಟು  ಕಮಿಷನ್ ಆರೋಪ ಮಾಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿದೆ. ಬಿಜೆಪಿ ಸರ್ಕಾರದ ವಿರುದ್ಧ  ಶೇಕಡಾ ೪೦ರಷ್ಟು ಕಮಿಷನ್ ಆರೋಪ ಮಾಡಿದ್ದ ಕಾಂಗ್ರೆಸ್  ಭ್ರಷ್ಟಾಚಾರದ ಬಲೆಗೆ ಸಿಲುಕಿದೆ. ಗುತ್ತಿಗೆದಾರರ ಪತ್ರವೇ ಇದಕ್ಕೆ ಸಾಕ್ಷಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿ ಅವಧಿಯಲ್ಲಿನ ಹಗರಣಗಳ ತನಿಖೆಗೆಂದು ನೇಮಕ ಮಾಡಿದ್ದ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗಕ್ಕೆ ನೀಡಿದ್ದ ಎಲ್ಲಾ ಸೌಲಭ್ಯಗಳನ್ನು ಸರ್ಕಾರ ಹಿಂಪಡೆದಿರುವುದನ್ನು ಖಂಡಿಸಿದರು. ನಾಗಮೋಹನ್ ದಾಸ್ ಅವರ ಆಯೋಗದ ಹಲ್ಲುಗಳನ್ನು ಕಿತ್ತು ಹಾಕಿದ್ದಾರೆ ಎಂದು ದೂರಿದರು.

><><><><><

ಕೇಂದ್ರ ಸರಕಾರದ  ಸ್ಮಾರ್ಟ್ ಸಿಟಿ ಯೋಜನೆಯಡಿ ಅಭಿವೃದ್ಧಿಗೊಂಡಿರುವ ಹುಬ್ಬಳ್ಳಿಯ ಉಣಕಲ್ ಕೆರೆಯಲ್ಲಿ  ಬೋಟಿಂಗ್ ಹಾಗೂ ವಾಟರ್ ಸ್ಪೋರ್ಟ್ಸ್ ಮತ್ತು ಸಾಹಸ ಕ್ರೀಡೆಗೆ  ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಬೋಟಿಂಗ್ ಮಾಡುವ ಮೂಲಕ ಚಾಲನೆ ನೀಡಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ  ಸಚಿವರು,  ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೆರೆ ಅಭಿವೃದ್ಧಿ ಮಾಡಲಾಗಿದ್ದು, ಜನರು  ಇದರ ಉಪಯೋಗ ಪಡೆಯಬೇಕು ಎಂದು ಹೇಳಿದರು.  ಕೆರೆ ಸ್ವಚ್ಛತೆಗೆ ಮಹಾನಗರ ಪಾಲಿಕೆ ಮತ್ತು ರಾಜ್ಯ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ಬೋಟಿಂಗ್ ನಿಂದ ಬರುವ ಆದಾಯದಿಂದ ಸ್ವಚ್ಛತೆ ಮತ್ತು ನಿರ್ವಹಣೆಗೆ ಕ್ರಮಕೈಗೊಳ್ಳಬೇಕು ಎಂದು ಮಹಾನಗರ ಪಾಲಿಕೆಗೆ ಸೂಚಿಸಿದರು.

><><><><><

ಚನ್ನಪಟ್ಟಣ ತಾಲ್ಲೂಕಿನ ಅಂಬಾಡಹಳ್ಳಿಯ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಸಹ ಶಿಕ್ಷಕಿಯಾಗಿ ಕಾರ್ಯನಿರ್ವಹಿಸುತ್ತಿರುವ ಶಾಂತಮ್ಮ  ಸಾಮಾಜಿಕ ಮತ್ತು ಶೈಕ್ಷಣಿಕ ಕಾರ್ಯವನ್ನು ಕೇವಲ ೭ ದಿನಗಳಲ್ಲಿಯೇ ಪೂರ್ಣಗೊಳಿಸಿ ಶೇಕಡಾ ೧೦೦ರಷ್ಟು ಸಾಧನೆ ಮಾಡಿದ್ದಾರೆ. ರಾಮನಗರ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಶಾಂತಮ್ಮ ಅವರಿಗೆ ನಗದು ಬಹುಮಾನ ನೀಡಿ ಅವರ ಕಾರ್ಯವನ್ನು ಪ್ರಶಂಸಿಸಿದ್ದಾರೆ. ಸಮೀಕ್ಷೆಯಲ್ಲಿ ನೀವು ತೋರಿದ ಆಸಕ್ತಿ, ಉತ್ಸಾಹ ಮತ್ತು ಪ್ರಾಮಾಣಿಕ ಪ್ರಯತ್ನವು ಸಮೀಕ್ಷಾ ಕಾರ್ಯ ತ್ವರಿತವಾಗಿ ಸಾಗಲು ಸಹಕಾರಿಯಾಗಿದೆ ಎಂದು ಹೇಳಿದ್ದಾರೆ.

><><><><><

ಹಿರಿಯ ರಂಗಭೂಮಿ ಕಲಾವಿದ ಯಶವಂತ ಸರದೇಶಪಾಂಡೆ  ಇಂದು ಬೆಳಿಗ್ಗೆ ಬೆಂಗಳೂರಿನಲ್ಲಿ ಹೃದಯಾಘಾತದಿಂದ ನಿಧನರಾಗಿದ್ದಾರೆ. ಅವರಿಗೆ ೮೦ ವರ್ಷ ವಯಸ್ಸಾಗಿತ್ತು. ಕನ್ನಡ ರಂಗಭೂಮಿ ನಟರಾಗಿ ಅವರು ಹೆಚ್ಚು ಜನಪ್ರಿಯರಾಗಿದ್ದರು. ಅವರು ಮುಖ್ಯವಾಗಿ ಹಾಸ್ಯ ನಾಟಕಗಳಲ್ಲಿ ನಟಿಸುತ್ತಿದ್ದರು. ಕರ್ನಾಟಕ ಮಾತ್ರವಲ್ಲದೆ, ದೇಶ-ವಿದೇಶಗಳಲ್ಲಿಯೂ ನಾಟಕಗಳನ್ನು ಮಾಡಿದ್ದರು. ಈ ಬಗ್ಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸೋಶಿಯಲ್ ಮೀಡಿಯಾ ಮೂಲಕ ಮಾಹಿತಿ ಹಂಚಿಕೊಂಡಿದ್ದಾರೆ. ‘ಖ್ಯಾತ ಕನ್ನಡ ರಂಗಭೂಮಿ ನಟ, ರಾಜ್ಯಾದ್ಯಂತ ಅನೇಕ ನಾಟಕಗಳಲ್ಲಿ ನಟಿಸಿ-ನಿರ್ದೇಶಿಸಿ ಅತ್ಯಂತ ಜನಪ್ರಿಯ ನಾಟಕಕಾರರಾಗಿದ್ದ  ನಮ್ಮ ಹುಬ್ಬಳ್ಳಿಯ ಯಶವಂತ ಸರದೇಶಪಾಂಡೆ ನಿಧನರಾದ ವಿಷಯ ತಿಳಿದು ಅತ್ಯಂತ ದುಃಖವಾಗಿದೆ. ಅವರ ಆಲ್ ದಿ ಬೆಸ್ಟ್ ನಾಟಕ ಅಭೂತಪೂರ್ವ ಯಶಸ್ಸು ಕಂಡಿತು. ಕಿರುತೆರೆ ಮತ್ತು ಚಲನಚಿತ್ರಗಳಲ್ಲಿಯೂ ಇವರು ಪಾತ್ರವಹಿಸುತ್ತಿದ್ದರು’ ಎಂದು ಅವರು ಬರೆದುಕೊಂಡಿದ್ದಾರೆ.

><><><><><

ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಆತಗೂರು ಹೋಬಳಿಯ ಮಲ್ಲನಕುಪ್ಪೆ ಗ್ರಾಮದ ಪ್ರಗತಿಪರ ರೈತ ಶಿವರಾಮೇಗೌಡರ ಜಮೀನಿಗೆ ವಿವಿಧ ದೇಶಗಳ ಕೃಷಿ ಅಧಿಕಾರಿಗಳು ಭೇಟಿ ನೀಡಿ ಸ್ಥಳೀಯ ರೈತರು ಮತ್ತು ಅಧಿಕಾರಿಗಳಿಂದ ಮಾಹಿತಿ ಪಡೆದರು

><><><**END**><><><